| | | | | |
|---|---|---|---|---|
| | | 12 | ಮೀನುಗಾರಿಕೆ ಇಲಾಖೆ | 29.50 |
| | | 13 | ಸಹಕಾರ ಇಲಾಖೆ | 14.00 |
| | | 14 | ಸಾಮಾಜಿಕ ಅರಣ್ಯ ಇಲಾಖೆ | 50.00 |
| | | 15 | ಕೈಗಾರಿಕೆ ಇಲಾಖೆ | 14.00 |
| | | 16 | ರೇಷ್ಮೆ ಇಲಾಖೆ | 29.00 |
| | | 17 | ಕೈಮಗ್ಗ ಮತ್ತು ಜವಳಿ ಇಲಾಖೆ | 7.00 |
| | | 18 | ಜಲಾನಯನ ಇಲಾಖೆ | 232.73 |
| | | | **ಒಟ್ಟು** | **7242.70** |

| | | | |
|---|---|---|---|
| 4 | ಶಿಷ್ಟಾಚಾರ ಪಾಲಿಸದೆ ಇರುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ. ಪುರುಷೋತ್ತಮ ರವರು ಮಾತನಾಡಿ ಆಲೂರು, ಸಕಲೇಶಪುರ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧ ಕಟ್ಟಡಗಳನ್ನು ನಿರ್ಮಿಸಿ, ಉದ್ಘಾಟನೆಗೆ ಜಿಲ್ಲಾ ಪಂಚಾಯತ್ ಸದಸ್ಯರು, ತಾಲ್ಲೂಕು ಪಂಚಾಯತ್ ಸದಸ್ಯರು, ಗ್ರಾಮ ಪಂಚಾಯತ್ ಸದಸ್ಯರು ಗಳನ್ನು ಆಹ್ವಾನಿಸದಿರುವ ಬಗ್ಗೆ ಪ್ರಸ್ತಾಪಿಸಿದರು, ಇದನ್ನು ಸಮರ್ಥಿಸಿದ ಮಾನ್ಯ ಸದಸ್ಯರಾದ ಶ್ರೀ. ಬಿ.ಎನ್.ರಾಮಚಂದ್ರ (ಬೈರಮುಡಿ ಚಂದ್ರು) ರವರು ಚುನಾಯಿತ ಜನಪ್ರತಿನಿಧಿಗಳನ್ನು ಕಡೆಗಣಿಸಿರುವುದಾಗಿ ತಿಳಿಸಿದರು. ಇದನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತರುವುದಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ.ವಿ.ಎ.ನಂಜುಂಡಸ್ವಾಮಿ ರವರು ಮಾತನಾಡಿ ಅರಕಲಗೂಡು ತಾಲ್ಲೂಕಿನಲ್ಲಿ ಮೊರಾರ್ಜಿದೇಸಾಯಿ ವಸತಿ ಶಾಲೆಯ ಉದ್ಘಾಟನೆಯನ್ನು ಮಾಡಿದ್ದು, ಸದರಿ ಸಮಾರಂಭದಲ್ಲಿಯೂ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್/ಗ್ರಾಮ ಪಂಚಾಯತ್ ಸದಸ್ಯರನ್ನು ಆಹ್ವಾನಿಸಿರುವುದಿಲ್ಲವೆಂದು ತಿಳಿಸಿದರು. | ಶಿಷ್ಟಾಚಾರವನ್ನು ಪಾಲಿಸದೆ ಇರುವ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯುವಂತೆ ಸಭೆಯಲ್ಲಿ ನಿರ್ಣಯಿಸಲಾಯಿತು. |
| | | ಸಭೆಯಲ್ಲಿ ಮತ್ತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಬಿ.ಆರ್.ಸತ್ಯನಾರಾಯಣ)
ಅಧ್ಯಕ್ಷರು
ಜಿಲ್ಲಾ ಪಂಚಾಯತಿ, ಹಾಸನ.

<table>
<tr>
<td></td>
<td></td>
<td>ಕಾಮಗಾರಿಗಾಗಿ ಅಂದಾಜು ರೂ.1.40 ಲಕ್ಷ ವೆಚ್ಚ ಆಗುವ ನಿರೀಕ್ಷೆ ಆಗುವುದಾಗಿ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದವರು ಅಂದಾಜು ಪಟ್ಟಿ ಸಲ್ಲಿಸಿದ್ದಾರೆ. ಈ ಕಾಮಗಾರಿ ನಿರ್ವಹಿಸಲು ಲೆಕ್ಕ ಶೀರ್ಷಿಕೆ 2205-00-104-0-29 ಕೀಡಾ ವಸತಿ ಶಾಲೆ ಅಡಿಯಲ್ಲಿ ಹಂಚಿಕೆ ಮಾಡಿಕೊಂಡು ಆರೋಗ್ಯ ಮತ್ತು ಶಿಕ್ಷಣ ಸ್ಥಾಯಿ ಸಮಿತಿಯಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳ ಪೈಕಿ, ಕ್ರೀಡಾ ನಿಲಯದ ಮಕ್ಕಳಿಗೆ ಕ್ರೀಡಾ ಸಲಕರಣೆ ಮತ್ತು ಸಮವಸ್ತ್ರ ನೀಡಲು ಹಂಚಿಕೆ ಮಾಡಿಕೊಂಡಿರುವ ರೂ.1,20,000-00 ಮತ್ತು ದುರಸ್ತಿಗೆ ಹಂಚಿಕೆ ಮಾಡಿಕೊಂಡಿರುವ ರೂ.60,000/- ದಲ್ಲಿ ಉಳಿಕೆ ಇರುವ ರೂ.35,000/- ದಲ್ಲಿ ರೂ.20,000/- ಗಳನ್ನು ಸೇರಿಸಿ ಒಟ್ಟು ರೂ.1,40,000/- ಗಳನ್ನು ಭರಿಸಲು ಕ್ರಿಯಾ ಯೋಜನೆಗೆ ತಿದ್ದುಪಡಿ ಮಾಡಿ ಅನುಮೋದನೆ ನೀಡಲು ಕೋರಿದರು.</td>
<td></td>
</tr>
<tr>
<td>3</td>
<td>ಹಾಸನ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಇಲಾಖಾ ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆ ಬಗ್ಗೆ.</td>
<td>ಟಿಪ್ಪಣಿ ಸಂಖ್ಯೆ:ಜಿಪಂಹಾ/ಯೋವಿ(4)/ಇಲಾಖಾ ಕ್ರಿ.ಯೋ/2012-13, ದಿ:23-08-2012 ನ್ನು ಸಭೆಯಲ್ಲಿ ಮಂಡಿಸಲಾಯಿತು.<br><br>2012-13ನೇ ಸಾಲಿನ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಇಲಾಖಾ ಕಾರ್ಯಕ್ರಮಗಳ ಕ್ರಿಯಾ ಯೋಜನೆಗಳನ್ನು ಆಯಾ ಸ್ಥಾಯಿ ಸಮಿತಿಗಳಲ್ಲಿ ಮಂಡಿಸಿ ಅನುಮೋದನೆ ಪಡೆದಿದ್ದು, ಈ ಕೆಳಕಂಡಂತಿರುವ ವಿವಿಧ ಇಲಾಖೆಗಳ ಅನುದಾನದ ಕ್ರಿಯಾ ಯೋಜನೆಗಳನ್ನು ಸಾಮಾನ್ಯ ಸಭೆಯ ಅನುಮೋದನೆಗಾಗಿ ಮಂಡಿಸಲಾಯಿತು.
<table>
<tr><th>ಕ್ರ ಸಂ.</th><th>ಇಲಾಖೆಗಳ ಹೆಸರು</th><th>ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>ಶಿಕ್ಷಣ ಇಲಾಖೆ</td><td>3108.08</td></tr>
<tr><td>2</td><td>ವಯಸ್ಕರ ಶಿಕ್ಷಣ ಇಲಾಖೆ</td><td>10.00</td></tr>
<tr><td>3</td><td>ಯೋಜನಸೇವಾ ಮತ್ತು ಕ್ರೀಡಾ ಇಲಾಖೆ</td><td>35.00</td></tr>
<tr><td>4</td><td>ಆರೋಗ್ಯ ಇಲಾಖೆ</td><td>2020.68</td></tr>
<tr><td>5</td><td>ಆಯುಷ್ ಇಲಾಖೆ</td><td>20.00</td></tr>
<tr><td>6</td><td>ಸಮಾಜ ಕಲ್ಯಾಣ ಇಲಾಖೆ</td><td>268.43</td></tr>
<tr><td>7</td><td>ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ</td><td>679.28</td></tr>
<tr><td>8</td><td>ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಇಲಾಖೆ</td><td>476.25</td></tr>
<tr><td>9</td><td>ಕೃಷಿ ಇಲಾಖೆ</td><td>105.50</td></tr>
<tr><td>10</td><td>ತೋಟಗಾರಿಕೆ ಇಲಾಖೆ</td><td>60.25</td></tr>
<tr><td>11</td><td>ಪಶುಪಾಲನೆ ಇಲಾಖೆ</td><td>83.00</td></tr>
</table>
</td>
<td>ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ 2012-13ನೇ ಸಾಲಿನ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಇಲಾಖಾ ಕಾರ್ಯಕ್ರಮಗಳ ಕ್ರಿಯಾ ಯೋಜನೆಗೆ ಸರ್ವಾನುಮತದಿಂದ ಅನುಮೋದನೆ ನೀಡಲಾಯಿತು.</td>
</tr>
</table>

| | | | |
|---|---|---|---|
| 10. | ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು. | | |
| 1 | ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗಡೆ ಯಾದ ಅನುದಾನವನ್ನು ಬಳಕೆ ಮಾಡದೆ ವ್ಯಪಗತ ಮಾಡಿರುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ.ಬಿ.ಡಿ.ಚಂದ್ರೇಗೌಡರು, ಶ್ರೀ ದೇವೇಗೌಡ ಉರುಫ್ ಪಾಪಣ್ಣಿಯವರು ಹಾಗೂ ಶ್ರೀ ಹುಚ್ಚೇಗೌಡರು ಮಾತನಾಡಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವತಿಯಿಂದ ರೂ.29.54 ಲಕ್ಷ, ಚನ್ನರಾಯಪಟ್ಟಣ ವಿಭಾಗದ ವತಿಯಿಂದ ರೂ.1.60 ಲಕ್ಷ ವಾಪಸ್ ಹೋಗಿದೆ ಎಂಬ ಮಾಹಿತಿಯನ್ನು ಅಧಿಕಾರಿಗಳಿಂದಲೇ ಪಡೆದಿರುವುದಾಗಿ ತಿಳಿಸುತ್ತಾ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮವಹಿಸಬೇಕೆಂದು ಆಗ್ರಹಿಸಿದರು. ಮುಂದುವರೆದು ಮಾತನಾಡಿದ ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರು ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಅಣತಿ, ಕೆಂಬಾಳು ಗ್ರಾಮಗಳಲ್ಲಿ ನಿರ್ವಹಿಸಿದ ಕಾಮಗಾರಿಗಳ ಬಿಲ್ ಪಾವತಿಯಾಗಿಲ್ಲವೆಂಬ ವಿಷಯವನ್ನು ಸಭೆಯ ಗಮನಕ್ಕೆ ತಂದರು. | ಮಾನ್ಯ ಸದಸ್ಯರುಗಳು ತಿಳಿಸಿದಂತೆ ಈ ಬಗ್ಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ಪರಿಶೀಲಿಸಿ ವರದಿಯನ್ನು ನೀಡುವಂತೆ ತಿಳಿಸಿದ ಮಾನ್ಯ ಅಧ್ಯಕ್ಷರು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕೆಂದು ಸೂಚಿಸಿದರು. |
| 2 | ಸಹಾಯಕ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಅಡಿ ನಡೆಸುತ್ತಿರುವ ಕ್ರೀಡಾ ವಸತಿ ನಿಲಯಕ್ಕೆ ನೀರಿನ ಸಂಪರ್ಕ ಕಲ್ಪಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ:ಸನಿಯುಸೇಕ್ರೀ.ಹಾ/29/ಕ್ರೀನಿ/ಯೋ/2012-13 ದಿನಾಂಕ:22-08-2012 ನ್ನು ಸಭೆಯಲ್ಲಿ ಮಂಡಿಸಲಾಯಿತು.<br>ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ ಸಹಾಯಕ ನಿರ್ದೇಶಕರ ಕಚೇರಿ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, ಹಾಸನ ಅಡಿಯಲ್ಲಿ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾ ವಸತಿ ನಿಲಯವನ್ನು ನಡೆಸುತ್ತಿದ್ದು, ಈ ಕ್ರೀಡಾ ನಿಲಯದಲ್ಲಿ 2012-13ನೇ ಸಾಲಿಗೆ 42 ಮಕ್ಕಳು ತರಬೇತಿ ಪಡೆಯುತ್ತಿದ್ದಾರೆ. ಈ ಕ್ರೀಡಾ ನಿಲಯಕ್ಕೆ ಅದರ ಮುಂಭಾಗದಲ್ಲಿ ಒಂದು ಕೊಳವೆ ಬಾವಿಯನ್ನು ಕೊರೆಸಿ ಸಂಪರ್ಕ ಕಲ್ಪಿಸಲಾಗಿದ್ದು, ಕಳೆದ 2 ವರ್ಷದಿಂದ ಯಾವುದೇ ತೊಂದರೆ ಇಲ್ಲದೆ ಕ್ರೀಡಾ ನಿಲಯವನ್ನು ನಿರ್ವಹಣೆ ಮಾಡಲಾಗುತ್ತಿತ್ತು. ಆದರೆ ಇತ್ತೀಚೆಗೆ ಅಂದರೆ 15 ದಿನದಿಂದ ಕೊಳವೆ ಬಾವಿ ಬತ್ತಿ ಹೋಗಿದ್ದು, ನೀರಿಲ್ಲದೆ ಮೋಟಾರ್ ಹಾಳಾಗುತ್ತಿದೆ. ಮತ್ತು ಇದರಿಂದ ಮಕ್ಕಳಿಗೆ ಊಟಕ್ಕೆ ಮತ್ತು ಸ್ನಾನಕ್ಕೆ ತುಂಬಾ ತೊಂದರೆ ಉಂಟಾಗಿದೆ. ಹೊರಗಡೆಯಿಂದ ನೀರು ತರಿಸಲು ನೆಲಮಟ್ಟದಲ್ಲಿ ನೀರು ಸಂಗ್ರಹ ತೊಟ್ಟಿ ಇರುವುದಿಲ್ಲ. ಈ ಕಾರಣದಿಂದ ಕ್ರೀಡಾ ನಿಲಯಕ್ಕೆ ಕೂಡಲೇ ಬೇರೆ ಮೂಲದಿಂದ ಸಂಪರ್ಕ ಕಲ್ಪಿಸಬೇಕಾಗಿರುತ್ತದೆ. ಪ್ರಸ್ತುತ ಜಿಲ್ಲಾ ಕ್ರೀಡಾಂಗಣದಲ್ಲಿ ಹೊಸದಾಗಿ ಕೊರೆಸಿರುವ ಕೊಳವೆ ಬಾವಿಯಲ್ಲಿ ಸಾಕಷ್ಟು ನೀರಿನ ಸಂಗ್ರಹವಿದ್ದು, ಈ ಕೊಳವೆ ಬಾವಿಯಿಂದ ಕ್ರೀಡಾ ನಿಲಯಕ್ಕೆ ಸಂಪರ್ಕ ಕಲ್ಪಿಸಬೇಕಾಗಿದ್ದು, ಈ | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ಪ್ರಸ್ತುತ ಜಿಲ್ಲಾ ಕ್ರೀಡಾಂಗಣದಲ್ಲಿ ಹೊಸದಾಗಿ ಕೊರೆಸಿರುವ ಕೊಳವೆ ಬಾವಿಯಿಂದ ಕ್ರೀಡಾನಿಲಯಕ್ಕೆ ಸಂಪರ್ಕ ಕಲ್ಪಿಸಲು ಲೆಕ್ಕ ಶೀರ್ಷಿಕೆ 2205-00-104-0-29 ಕೀಡಾ ವಸತಿ ಶಾಲೆ ಅಡಿಯಲ್ಲಿ ಹಂಚಿಕೆ ಮಾಡಿಕೊಂಡು ಆರೋಗ್ಯ ಮತ್ತು ಶಿಕ್ಷಣ ಸ್ಥಾಯಿ ಸಮಿತಿಯಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳ ಪೈಕಿ, ಕ್ರೀಡಾ ನಿಲಯದ ಮಕ್ಕಳಿಗೆ ಕ್ರೀಡಾ ಸಲಕರಣೆ ಮತ್ತು ಸಮವಸ್ತ್ರ ನೀಡಲು ಹಂಚಿಕೆ ಮಾಡಿಕೊಂಡಿರುವ ರೂ.1,20,000-00 ಮತ್ತು ದುರಸ್ತಿಗೆ ಹಂಚಿಕೆ ಮಾಡಿಕೊಂಡಿರುವ ರೂ.60,000/- ದಲ್ಲಿ ಉಳಿಕೆ ಇರುವ ರೂ.35,000/- ದಲ್ಲಿ ರೂ.20,000/- ಗಳನ್ನು ಸೇರಿಸಿ ಒಟ್ಟು ರೂ.1,40,000/- ಗಳನ್ನು ಭರಿಸಲು ಕ್ರಿಯಾ ಯೋಜನೆ ತಿದ್ದುಪಡಿಗೆ ಸರ್ವಾನುಮತದಿಂದ ಅನುಮೋದನೆ ನೀಡಲಾಯಿತು. |

| | | | |
|---|---|---|---|
| | | 2011-12ನೇ ಸಾಲಿನಲ್ಲಿ ಬೆಳೆಸಿರುವ 12.40 ಲಕ್ಷ ಸಸಿಗಳಲ್ಲಿ 2.50 ಲಕ್ಷ ಸಸಿಗಳನ್ನು ಈಗಾಗಲೇ ರೈತರಿಗೆ ವಿತರಣೆ ಮಾಡಲಾಗಿದೆ, ಈಗ ಮಳೆಗಾಲ ಪ್ರಾರಂಭವಾಗಿದ್ದು, ಬೇಡಿಕೆಗೆ ಅನುಗುಣವಾಗಿ ಉಳಿದ ಸಸಿಗಳನ್ನು ವಿತರಿಸಲಾಗುವುದೆಂದು ಅಲ್ಲಿಯವರೆಗೆ ಸಾಮಾಜಿಕ ಅರಣ್ಯ ವಿಭಾಗದಲ್ಲಿಯೇ ನಿರ್ವಹಿಸಲಾಗುವುದು ಎಂದು ತಿಳಿಸಿದ ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ನರ್ಸರಿಗಳಲ್ಲಿ ಬೆಳೆಸಿರುವ ಸಸಿಗಳ ಬಗ್ಗೆ ತಾಲ್ಲೂಕುವಾರು ಮಾಹಿತಿಯನ್ನು ಸಭೆಯಲ್ಲಿ ವಿವರಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿ ರವರು ಮಾತನಾಡಿ ಗೊರೂರು ಡ್ಯಾಂ ಹತ್ತಿರ ಸಸಿಗಳನ್ನು ಬೆಳೆಸಲು ಸ್ಥಳಾವಕಾಶವನ್ನು ಕಲ್ಪಿಸಿಕೊಡಬೇಕೆಂದು ಹಾಗೂ ಸದರಿ ಪ್ರದೇಶ ತಮ್ಮ ಕ್ಷೇತ್ರದ ವ್ಯಾಪ್ತಿಗೆ ಬರುವುದರಿಂದ ಡ್ಯಾಂ ಒಳಗೆ ವಾಹನಗಳನ್ನು ತೆಗೆದುಕೊಂಡು ಹೋಗಲು ಅನುಮತಿಯನ್ನು ಕೊಡಿಸಿಕೊಡಬೇಕೆಂದು ಕೋರಿದರು. ಈ ಬಗ್ಗೆ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರೊಡನೆ ಚರ್ಚಿಸುವುದಾಗಿ ಮುಖ್ಯ ಕಾರ್ಯನಿರ್ವಾಹಕ **ಅಧಿಕಾರಿಯವರು ತಿಳಿಸಿದರು.** | |
| 8. | ದಿನಾಂಕ:28-06-2012 ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ:28-06-2012 ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ.ಎಂ.ಕೆ.ದೇವಪ್ಪ ಮಲ್ಲಿಗೆವಾಳು ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿ:28-06-2012 ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 9. | 2011-12ನೇ ಸಾಲಿನ ವಾರ್ಷಿಕ ಲೆಕ್ಕವನ್ನು ಸಾಮಾನ್ಯ ಸಭೆಯಲ್ಲಿ ಮಂಡಿಸುವ ಬಗ್ಗೆ. | ಟಿಪ್ಪಣಿ ಸಂಖ್ಯೆ:ಜಿಪಂಹಾ/ಆರ್ಥಿಕ/ಸಂಕಲನ/ವಾರ್ಷಿಕ ಲೆಕ್ಕ/2012-13, ದಿ:09-08-2012 ನ್ನು ಸಭೆಯಲ್ಲಿ ಮುಖ್ಯ ಲೆಕ್ಕಾಧಿಕಾರಿಯವರು ಮಂಡಿಸಿದರು.<br>ಹಾಸನ ಜಿಲ್ಲಾ ಪಂಚಾಯತ್‌ನ 2011-12ನೇ ಸಾಲಿನ ವಾರ್ಷಿಕ ಲೆಕ್ಕದ ಜಮಾ ಮತ್ತು ಖರ್ಚಿನ ವಿವರ ಈ ಕೆಳಕಂಡಂತೆ ಮಂಡಿಸಲಾಯಿತು.<br><br>ಜಮಾ: ರೂ. 2010728560<br>ಖರ್ಚು: ರೂ. 1831554622 | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ 2011-12ನೇ ಸಾಲಿನ ವಾರ್ಷಿಕ ಲೆಕ್ಕದ ಜಮಾ ಮತ್ತು ಖರ್ಚಿನ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಲು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

| | | | |
|---|---|---|---|
| | | ನಿರ್ಣಯಿಸಲಾಗಿದ್ದು ಈ ಬಗ್ಗೆ ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳಿಗೆ ಸೂಚನೆ ನೀಡಲಾಗಿದೆಯೇ ಎಂದು ಪ್ರಶ್ನಿಸಿದರು. ಈ ಬಗ್ಗೆ ಕ್ರಮವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದರು.<br><br>ವಿರೋಧಪಕ್ಷದ ಮಾನ್ಯ ಸದಸ್ಯರುಗಳು ರಸ್ತೆ ಅಭಿವೃದ್ಧಿಗಾಗಿ ಬಿಡುಗಡೆಯಾಗಿರುವ ಅನುದಾನವನ್ನು ಎಲ್ಲಾ ಸದಸ್ಯರುಗಳ ಕ್ಷೇತ್ರಕ್ಕೆ ಸಮನಾಗಿ ಹಂಚಿಕೆ ಮಾಡದೆ ತಾರತಮ್ಯ ಮಾಡಲಾಗಿದೆ ಎಂದು ಆಕ್ಷೇಪಿಸಿದಾಗ, ಆಡಳಿತ ಪಕ್ಷದ ಮಾನ್ಯ ಸದಸ್ಯರುಗಳು ಸದರಿ ವಿಷಯ ಮಾನ್ಯ ಅಧ್ಯಕ್ಷರ ವಿವೇಚನೆಗೆ ಬಿಡಲಾಗಿದೆ ಎಂದು ತಿಳಿಸಿದರು. ವಿರೋಧ ಪಕ್ಷದ ಸದಸ್ಯರುಗಳು ಮಾನ್ಯ ಅಧ್ಯಕ್ಷರು ಸಮರ್ಪಕ ಉತ್ತರ ನೀಡುತ್ತಿಲ್ಲ ಎಂದು ಆರೋಪಿಸಿ ಸಭೆಯನ್ನು ಬಹಿಷ್ಕರಿಸಿ ಹೊರನಡೆದರು. | |
| 6. | ದಿನಾಂಕ:29-06-2012 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ:29-06-2012 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಸ್ವಾಮಿಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಹೇಮಾವತಿ ಮಂಜುನಾಥ್ ರವರು ಅನುಮೋದಿಸಿದರು. | ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ:29-06-2012 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 7. | ದಿನಾಂಕ:27-06-2012 ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ:27-06-2012 ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿ ರವರು ಅನುಮೋದಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ದೇವೇಗೌಡ ಉರುಫ್ ಪಾಪಣ್ಣರವರು ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಸಾಮಾಜಿಕ ಅರಣ್ಯ ವಿಭಾಗ, ಹಾಸನ ಇವರ ವತಿಯಿಂದ 2011-12ನೇ ಸಾಲಿನಲ್ಲಿ ಬೆಳೆಸಿರುವ 12.40 ಲಕ್ಷ ಸಸಿಗಳನ್ನು ರೈತರಿಗೆ ವಿತರಿಸಿರುವ ಬಗ್ಗೆ ಹಾಗೂ ಜಿಲ್ಲೆಯಲ್ಲಿ ಯಾವ ಯಾವ ನರ್ಸರಿಗಳಲ್ಲಿ ಎಷ್ಟೆಷ್ಟು ಸಸಿಗಳನ್ನು ಬೆಳೆಸಲಾಗಿದೆ ಎಂಬ ಬಗ್ಗೆ ಮಾಹಿತಿಯನ್ನು ನೀಡುವಂತೆ ಕೋರಿದರು. | ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ:27-06-2012 ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

| | | | |
|---|---|---|---|
| | | ಲಕ್ಷಗಳನ್ನು ಮುಂದುವರೆದ ಕಾಮಗಾರಿಗಳಿಗೆ ವಿನಿಯೋಗಿಸಲು ಹಾಗೂ ಉಳಿದ ರೂ.263.70 ಲಕ್ಷಗಳ ಹಾಗೂ ಹೆಚ್ಚುವರಿ ರೂ.33.30 ಲಕ್ಷಗಳು ಸೇರಿ ಒಟ್ಟು ರೂ.300.00 ಲಕ್ಷಗಳಿಗೆ ಹೊಸ ಕ್ರಿಯಾ ಯೋಜನೆ ಸಿದ್ದಪಡಿಸಲು ಸಾಮಾನ್ಯ ಸ್ಥಾಯಿ ಸಮಿತಿ ಸಭೆಯಲ್ಲಿ ನಿರ್ಣಯಿಸಿರುವುದಾಗಿ ವಿವರಿಸಿದರು.<br>ಮಾನ್ಯ ಸದಸ್ಯರಾದ ಶ್ರೀ.ಎನ್.ಡಿ.ಕಿಶೋರ್ ರವರು ಮಾತನಾಡಿ ಆರ್.ಐ.ಡಿ.ಎಫ್. ಯೋಜನೆಯಡಿ ಪಶುಸಂಗೋಪನಾ ಕಟ್ಟಡಗಳನ್ನು ನಾಲ್ಕು ವರ್ಷಗಳ ಹಿಂದೆ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದರೂ ಬಾಕಿ ಹಣವನ್ನು ಇನ್ನು ಗುತ್ತಿಗೆದಾರರಿಗೆ ಪಾವತಿಸಿರುವುದಿಲ್ಲವೆಂದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ ಆರ್.ಐ.ಡಿ.ಎಫ್. ಅಡಿಯಲ್ಲಿ ನಿಗದಿಪಡಿಸಿರುವ ಘಟಕವೆಚ್ಚಕ್ಕೆ ತಕ್ಕಂತೆ ಕಟ್ಟಡಗಳನ್ನು ನಿರ್ಮಿಸಬೇಕಾಗಿದ್ದು, ಹೆಚ್ಚುವರಿ ಅನುದಾನ ನೀಡಲು ಅವಕಾಶವಿಲ್ಲದಿರುವುದರಿಂದ ಹೆಚ್ಚಿನ ಕಡೆಗಳಲ್ಲಿ ಎಸ್.ಆರ್.ದರ ಹೆಚ್ಚುವರಿಯಿಂದಾಗಿಯೂ ಈ ರೀತಿಯ ಸಮಸ್ಯೆಯಾಗಿದೆ ಎಂದು ಸ್ಪಷ್ಟಪಡಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡಿ ಆರ್.ಐ.ಡಿ.ಎಫ್.ಅಡಿಯಲ್ಲಿ ನಿರ್ಮಿಸಿರುವ **ಕಟ್ಟಡಗಳ ನಿರ್ಮಾಣಕ್ಕೆ ಘಟಕ ವೆಚ್ಚಕ್ಕೆ ಅನುಗುಣವಾಗಿ ಕ್ರಿಯಾ ಯೋಜನೆ** ತಯಾರಿಸುವಂತೆ ಕಾರ್ಯಪಾಲಕ ಅಭಿಯಂತರರುಗಳಿಗೆ ಸೂಚನೆ ನೀಡುತ್ತಾ, ಈ ಹಿಂದೆ ಆಗಿರುವ ಸಮಸ್ಯೆಗಳಿಗೆ ಬೇರೆ ಪರಿಹಾರವನ್ನು ಹುಡುಕಿ ಗುತ್ತಿಗೆದಾರರಿಗೆ ಬಾಕಿ ಹಣವನ್ನು ಪಾವತಿಸಲು ಪರಿಶೀಲಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ.ದೇವೇಗೌಡ ಉರುಫ್ ಪಾಪಣ್ಣಿ ರವರು ಆರ್.ಐ.ಡಿ.ಎಫ್. ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಸಂಬಂಧಿಸಿದಂತೆ ನಬಾರ್ಡ್ ವತಿಯಿಂದ ನಿಗದಿಪಡಿಸಿರುವ ರೂ.3.62 ಲಕ್ಷಗಳಲ್ಲಿ ಕಟ್ಟಡವನ್ನು ನಿರ್ಮಿಸಲು ಸಾಧ್ಯವಾಗದೇ ಇರುವುದರಿಂದ, ಪ್ರತಿ ಕಟ್ಟಡವನ್ನು ರೂ.4.00 ಲಕ್ಷಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ಅವಶ್ಯವಿರುವ ರೂ.38,000 ಗಳನ್ನು 2012-13ನೇ ಸಾಲಿನಲ್ಲಿ ಸಕಲೇಶಪುರ, ಹಾಸನ ಮತ್ತು ಆಲೂರು ತಾಲ್ಲೂಕು ಪಂಚಾಯತಿಗಳಿಗೆ ಬಿಡುಗಡೆಯಾಗುವ 13ನೇ ಹಣಕಾಸು ಯೋಜನೆಯಡಿ ಮತ್ತು ಅರಸೀಕೆರೆ, ಅರಕಲಗೂಡು, ಹೊಳೆನರಸೀಪುರ, ಬೇಲೂರು, ಚನ್ನರಾಯಪಟ್ಟಣ ತಾಲ್ಲೂಕುಗಳಿಗೆ ಬಿಡುಗಡೆಯಾಗುವ ವಿಶೇಷ ಅಭಿವೃದ್ಧಿ ಯೋಜನೆಯ ಅನುದಾನದಲ್ಲಿ ಭರಿಸುವಂತೆ ತಾಲ್ಲೂಕು ಪಂಚಾಯತಿಗಳಿಗೆ ತಿಳಿಸಲು ಸಾಮಾನ್ಯ ಸ್ಥಾಯಿ ಸಮಿತಿ ಸಭೆಯಲ್ಲಿ | |

| | | | |
|---|---|---|---|
| 4 | ದಿನಾಂಕ:02-7-2012 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ:02-7-2012 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಆರ್.ಸತ್ಯನಾರಾಯಣ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಸಭಾ ನಡವಳಿಗಳನ್ನು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿ:02-04-2012 ರಂದು ನಡೆದ ಹಣಕಾಸು, ಲೆಕ್ಕ ಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 5 | ದಿನಾಂಕ:04-07-2012 ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ:04-07-2012 ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಶ್ರೀಮತಿ ಜಿ.ಟಿ.ಇಂದಿರಾಧರ್ಮಪ್ಪ ರವರು ಸಭೆಗೆ ಮಂಡಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀಮತಿ.ಕುಸುಮ ಬಾಲಕೃಷ್ಣ ರವರು ಮಾತನಾಡಿ ಸ್ತ್ರೀಶಕ್ತಿ ಸಂಘದವರು ತಯಾರಿಸುತ್ತಿರುವ ಸಾಂಬಾರು ಪುಡಿ ಮತ್ತು ಇತರೆ ಆಹಾರಪದಾರ್ಥಗಳು ಉತ್ತಮ ಗುಣಮಟ್ಟದಿಂದ ಕೂಡಿದ್ದು, ವಿದ್ಯಾರ್ಥಿನಿಲಯಗಳಲ್ಲಿಯೂ ಅದನ್ನು ಬಳಸಬೇಕೆಂದು ಆಗ್ರಹಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣರವರು ಮತ್ತು ಶ್ರೀ ಅಮಿತ್ ಕುಮಾರ್ ಶೆಟ್ಟಿ ರವರು ಮಾತನಾಡಿ 3054 ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ 2012-13ನೇ ಸಾಲಿಗೆ ನಿಗಧಿಯಾಗಿರುವ ರೂ.330.37 ಲಕ್ಷಗಳನ್ನು ಎಲ್ಲಾ ಕ್ಷೇತ್ರಗಳ ಸದಸ್ಯರಿಗೂ ಸಮನಾಗಿ ಹಂಚಿಕೆ ಮಾಡಿಲ್ಲವೆಂದು ಆಕ್ಷೇಪಿಸಿದರು.<br>ಮುಖ್ಯ ಯೋಜನಾಧಿಕಾರಿಯವರು ಮಾತನಾಡಿ 3054 ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ 2012-13ನೇ ಸಾಲಿಗೆ ನಿಗದಿಯಾಗಿರುವ ರೂ.330.37 ಲಕ್ಷಗಳಲ್ಲಿ ಮುಂದುವರೆದ ಕಾಮಗಾರಿಗಳಿಗೆ ರೂ.110.00 ಲಕ್ಷಗಳನ್ನು ನಿಗದಿಪಡಿಸಿದ್ದು, ಉಳಿದ ರೂ.220.37 ಲಕ್ಷಗಳಲ್ಲಿ ಎನ್.ಎಂ.ಆರ್. ದಿನಗೂಲಿ ನೌಕರರ ವೇತನಕ್ಕೆ ರೂ.94.00 ಲಕ್ಷಗಳು ಒಟ್ಟು ರೂ.204.00 ಲಕ್ಷಗಳನ್ನು ನಿಗದಿಪಡಿಸಿದರೆ, ರೂ.126.37 ಲಕ್ಷಗಳು ಹೊಸ ಕಾಮಗಾರಿಗಳಿಗೆ ಲಭ್ಯವಾಗುತ್ತದೆ. ರೂ.73.63 ಲಕ್ಷಗಳನ್ನು ಹೆಚ್ಚುವರಿ ಸೇರಿಸಿ ರೂ.200.00 ಲಕ್ಷಗಳಿಗೆ ಹೊಸ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಲು ಹಾಗೂ ಅದೇ ರೀತಿಯಲ್ಲಿ 13ನೇ ಹಣಕಾಸು ಆಯೋಗದ ರಸ್ತೆ ಅಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ, 2012-13ನೇ ಸಾಲಿಗೆ ನಿಗದಿಯಾಗಿರುವ ರೂ.383.70 ಲಕ್ಷಗಳಲ್ಲಿ ರೂ.120.00 | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. ದಿನಾಂಕ:04-07-2012 ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಬಹುಮತದ ತೀರ್ಮಾನದಂತೆ ಅನುಮೋದಿಸಿತು. |

| | | | |
|---|---|---|---|
| | | ಐ.ಎಂ.ಐ.ಎಸ್. ಅಡಿಯಲ್ಲಿ ದಾಖಲಾಗಿರುವ ಗ್ರಾಮಗಳ ಬಗ್ಗೆ ಪರಿಶೀಲಿಸಿ, ಅವಶ್ಯಕತೆಯಿರುವ ಕಡೆಗಳಿಗೆ ಅನುದಾನವನ್ನು ವರ್ಗಾಯಿಸಲು ಕೋರಿ ಪ್ರಸ್ತಾವನೆಯನ್ನು ಮುಖ್ಯ ಇಂಜಿನಿಯರ್ ಹಾಗೂ ಪ್ರಧಾನ ಕಾರ್ಯದರ್ಶಿಗಳಿಗೆ ಕಳುಹಿಸುವುದಾಗಿ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್‌ಕುಮಾರ್ ಶೆಟ್ಟಿ ರವರು ಮಾತನಾಡಿ ಪ್ರತಿ ಸಲ ಸಾಮಾನ್ಯ ಸಭೆ ನಡೆಯುವ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಕರೆಸಬೇಕಾಗಿದ್ದು, ನಿಗದಿತ ಅವಧಿಯಲ್ಲಿ ಹಾಜರಾಗದೆ ಇರುವ ಬಗ್ಗೆ ಅಸಮಾಧಾನವನ್ನು ವ್ಯಕ್ತಪಡಿಸಿದರು. ಮಾನ್ಯ ಸದಸ್ಯರಾದ ಶ್ರೀ.ಈಶ್ವರಹಳ್ಳಿ ಲಕ್ಷ್ಮಣ ಮತ್ತು ಶ್ರೀ.ಎ.ಬಿ.ನಂಜುಂಡೇಗೌಡ ರವರು ಇದಕ್ಕೆ ಸಹಮತ ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀ.ಅಮಿತ್‌ಕುಮಾರ್ ಶೆಟ್ಟಿ ರವರು ಮಾತನಾಡಿ ಸಭಾಂಗಣದಲ್ಲಿರುವ ಮೈಕ್ ಸೆಟ್ ವ್ಯವಸ್ಥೆಯನ್ನು ಸರಿಪಡಿಸುವಂತೆ ಹಿಂದಿನ ಸಭೆಗಳಲ್ಲಿ ತಿಳಿಸಿದ್ದರೂ ಏನು ಕ್ರಮವಹಿಸದೆ ಇರುವ ವಿಷಯವನ್ನು ಸಭೆಯಲ್ಲಿ ಪ್ರಸ್ತಾಪಿಸಿದರು. ಮಾನ್ಯ ಸದಸ್ಯರಾದ ಶ್ರೀಮತಿ ಕುಸುಮ ಬಾಲಕೃಷ್ಣ ರವರು ಡೈನಿಂಗ್ ಹಾಲ್ ವ್ಯವಸ್ಥೆಯನ್ನು ಮಾಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ ಜಿಲ್ಲಾ ಪಂಚಾಯತ್ ಕಟ್ಟಡದ ನಾಲ್ಕನೇ ಅಂತಸ್ತಿನಲ್ಲಿ ಹೊಸದಾಗಿ ಸಭಾಂಗಣವನ್ನು ನಿರ್ಮಿಸಲು ರೂ.50.00 ಲಕ್ಷಗಳ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಸದರಿ ಸಭಾಂಗಣದಲ್ಲಿ ಎಲ್ಲಾ ವ್ಯವಸ್ಥೆಯನ್ನು ಮಾಡಲಾಗುವುದೆಂದು ಹಾಗೂ ಜಿಲ್ಲಾ ಪಂಚಾಯತ್ ಕಟ್ಟಡದಲ್ಲಿರುವ ಹಳೆಯ ಲಿಫ್ಟ್‌ಗಳನ್ನು ತೆಗೆದು ತುರ್ತಾಗಿ ಹೊಸ ಲಿಫ್ಟ್ ಗಳನ್ನು ಅಳವಡಿಸಲಾಗುವುದೆಂದು ತಿಳಿಸಿದರು. | |
| 3 | ದಿನಾಂಕ:14-06-2012 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ. | ದಿನಾಂಕ:14-06-2012 ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವಂತೆ ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಆರ್.ಸತ್ಯನಾರಾಯಣರವರು ಸಭೆಯನ್ನು ಕೋರಿದರು. | ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ:14-06-2012 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು. |

| | | | |
|---|---|---|---|
| 2 | ಬರಪರಿಹಾರ ಕಾಮಗಾರಿಗಳ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರು ಮಾತನಾಡುತ್ತಾ, ಬರಪರಿಹಾರ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಲು ಜಿಲ್ಲಾಧಿಕಾರಿಯವರಲ್ಲಿ ಲಭ್ಯವಿರುವ ಅನುದಾನದಲ್ಲಿ ರೂ.1.00 ಕೋಟಿಗಳ ಅನುದಾನವನ್ನು ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ ನೀಡಲು ಸೂಚಿಸಿದ್ದು, ಈ ಬಗ್ಗೆ ಜಿಲ್ಲಾಧಿಕಾರಿಗಳ ವತಿಯಿಂದ ಏನು ಕ್ರಮವಹಿಸಿಲ್ಲವೆಂದು, ಈ ವಿಷಯದಲ್ಲಿ ಜಿಲ್ಲಾಡಳಿತ ನಿಷ್ಕ್ರಿಯವಾಗಿದೆಯೆಂದು, ಟಾಸ್ಕ್‌ಫೋರ್ಸ್ ಸಮಿತಿಗಳಿಗೆ ಜಿಲ್ಲಾ ಪಂಚಾಯತ್ ಸದಸ್ಯರುಗಳನ್ನು ಆಹ್ವಾನಿಸುವುದಿಲ್ಲವೆಂದು, ಉಪವಿಭಾಗಾಧಿಕಾರಿಗಳು ಪ್ರತಿ 2-3 ತಿಂಗಳಿಗೊಮ್ಮೆ ಬದಲಾವಣೆಯಾಗುತ್ತಿದ್ದು, ಸಾರ್ವಜನಿಕರಿಗೆ ಹೆಚ್ಚಿನ ತೊಂದರೆಯಾಗುತ್ತಿರುವುದಾಗಿ ಅಸಮಾಧಾನವನ್ನು ವ್ಯಕ್ತಪಡಿಸಿದರು. ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪಟೇಲ್ ಶಿವರಾಂ ರವರು ಬರಪರಿಹಾರ ಕಾಮಗಾರಿಗಳ ಪಟ್ಟಿಯನ್ನು ಜಿಲ್ಲಾಧಿಕಾರಿಗಳಿಗೆ ನೀಡುವಂತೆ ತಿಳಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ.ಎಂ.ಎ.ರಂಗಸ್ವಾಮಿ ರವರು, ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್ ರವರು ಮಾತನಾಡಿ ಐ.ಎಂ.ಐ.ಎಸ್. ಅಡಿಯಲ್ಲಿ ಅವಶ್ಯಕತೆ ಇಲ್ಲದೆ ಇರುವ ಕಡೆಗಳಲ್ಲಿ ಜನವಸತಿಗಳಿಲ್ಲದೆ ಇರುವ ಬೇ-ಚರಕ್ ಗ್ರಾಮಗಳಿಗೆ ಅನುದಾನವನ್ನು ಒದಗಿಸಿರುವುದನ್ನು ಗಮನಿಸಿದ್ದು, ಇದನ್ನು ಸರಿಪಡಿಸಿ ಅವಶ್ಯಕತೆ ಇರುವ ಗ್ರಾಮಗಳಿಗೆ ಹೆಚ್ಚಿನ ಅನುದಾನವನ್ನು ನಿಗದಿಪಡಿಸಲು ಕ್ರಮವಹಿಸಬೇಕೆಂದು ತಿಳಿಸಿದರು.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡಿ ಟಾಸ್ಕ್‌ಫೋರ್ಸ್ ಅಡಿಯಲ್ಲಿ ಮಾನ್ಯ ಶಾಸಕರುಗಳಿಗೆ ಅನುದಾನವನ್ನು ಬಿಡುಗಡೆ ಮಾಡಿದ್ದು, ಜಿಲ್ಲಾ ಪಂಚಾಯತಿ ಸದಸ್ಯರುಗಳ ಕೋರಿಕೆಗೆ ಅನುಗುಣವಾಗಿ ಕುಡಿಯುವ ನೀರಿನ ಕಾಮಗಾರಿಗಳನ್ನು ತೆಗೆದುಕೊಳ್ಳಲು ಶಾಸಕರುಗಳನ್ನು ಕೋರಲಾಗಿದೆ ಎಂದು ತಿಳಿಸುತ್ತಾ, ಈ ಹಿಂದೆ ಜಿಲ್ಲೆಯ 6 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಸರ್ಕಾರದ ವತಿಯಿಂದ ಘೋಷಿಸಲಾಗಿದ್ದು, ನಂತರ ಆಲೂರು ತಾಲ್ಲೂಕನ್ನು ಬರಪೀಡಿತ ತಾಲ್ಲೂಕೆಂದು ಘೋಷಿಸಲಾಗಿದೆ ಎಂಬ ವಿಷಯವನ್ನು ಸಭೆಯ ಗಮನಕ್ಕೆ ತಂದರು. | ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯ ಬರಪೀಡಿತ ಪ್ರದೇಶಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನಕ್ಕೆ ಜಿಲ್ಲಾಧಿಕಾರಿಯವರಲ್ಲಿ ಲಭ್ಯವಿರುವ ಅನುದಾನದಲ್ಲಿ ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ ರೂ.1.00 ಕೋಟಿ ಅನುದಾನವನ್ನು ನೀಡಲು ತಿಳಿಸಲಾಗಿದ್ದು, ಸದರಿ ಅನುದಾನವನ್ನು ಈವರೆವಿಗೂ ನೀಡದೆ ಇರುವ ವಿಷಯದ ಬಗ್ಗೆ ಮತ್ತು ಟಾಸ್ಕ್‌ಫೋರ್ಸ್ ಸಮಿತಿಗಳಿಗೆ ಜಿಲ್ಲಾ ಪಂಚಾಯತ್ ಸದಸ್ಯರನ್ನು ಆಹ್ವಾನಿಸುವ ಬಗ್ಗೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ, ಈ ಬಗ್ಗೆ ಮತ್ತೊಂದು ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಯವರಿಗೆ ಕಳುಹಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.<br><br>ಐ.ಎಂ.ಐ.ಎಸ್. ಅಡಿಯಲ್ಲಿ ದಾಖಲಾಗಿರುವ ಗ್ರಾಮಗಳ ಬಗ್ಗೆ ಪರಿಶೀಲಿಸಿ ಅವಶ್ಯಕತೆಯಿರುವ ಕಡೆಗಳಿಗೆ ಅನುದಾನವನ್ನು ವರ್ಗಾಯಿಸಲು ಕೋರಿ ಪ್ರಸ್ತಾವನೆಯನ್ನು ಮುಖ್ಯ ಇಂಜಿನಿಯರ್ ಹಾಗೂ ಪ್ರಧಾನ ಕಾರ್ಯದರ್ಶಿಗಳಿಗೆ ಕಳುಹಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು.<br><br>ಹಾಸನ ಹಾಗೂ ಚನ್ನರಾಯಪಟ್ಟಣ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ಸಾಮಾನ್ಯ ಸಭೆಗೆ ನಿಗದಿತ ಅವಧಿಯಲ್ಲಿ ತಪ್ಪದೆ ಹಾಜರಾಗುವಂತೆ ಸೂಚಿಸಿ ನೋಟೀಸನ್ನು ಜಾರಿಗೊಳಿಸುವಂತೆ ಸಭೆಯಲ್ಲಿ ನಿರ್ಣಯಿಸಲಾಯಿತು. |

# ದಿನಾಂಕ:24-08-2012 ರಂದು ಅಪರಾಹ್ನ 12.30 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು.

**ಅಧ್ಯಕ್ಷತೆ : ಶ್ರೀ ಬಿ.ಆರ್.ಸತ್ಯನಾರಾಯಣ, ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಹಾಸನ.**

**ಹಾಜರಿ:44** **ಗೈರು ಹಾಜರಿ:14**

| ಕ್ರ.ಸಂ. | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ವಿಧಾನ ಪರಿಷತ್ ಸದಸ್ಯರು, ಮಾನ್ಯ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳು, ಮಾನ್ಯ ಜಿಲ್ಲಾ ಪಂಚಾಯತಿ ಸದಸ್ಯರುಗಳು, ತಾಲ್ಲೂಕು ಪಂಚಾಯತಿ ಮಾನ್ಯ ಅಧ್ಯಕ್ಷರುಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ **ಮಾನ್ಯ ಅಧ್ಯಕ್ಷರನ್ನು ಕೋರಿದರು.** | |
| 1 | ವಿ.ನಿಯಮಾವಳಿ ರಚನೆ ಬಗ್ಗೆ. | ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪಟೇಲ್ ಶಿವರಾಂ ರವರು ಮಾತನಾಡಿ ವಿ-ನಿಯಮಾವಳಿಗಳ ರಚನೆ ಬಗ್ಗೆ ಚರ್ಚಿಸಿ, ಜಿಲ್ಲಾ ಪಂಚಾಯತ್ ಸದಸ್ಯರುಗಳು ತಮ್ಮ ಕ್ಷೇತ್ರದ ಸಮಸ್ಯೆಗಳ ಕುರಿತು ಚರ್ಚಿಸಲು ಸಹಕಾರಿಯಾಗುವಂತೆ ಪ್ರಶ್ನೋತ್ತರ ಅವಧಿ ಮೀಸಲಿಡಬೇಕೆಂಬ ವಿಷಯವನ್ನು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಬಗ್ಗೆ ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ ರವರು ಮಾತನಾಡುತ್ತಾ, ಪ್ರಶ್ನೋತ್ತರ ಅವಧಿ ಇರಬೇಕು, ಇದರಿಂದ ಸದಸ್ಯರುಗಳಿಗೆ ಅವರವರ ಕ್ಷೇತ್ರದ ಸಮಸ್ಯೆಗಳನ್ನು ಪ್ರಸ್ತಾಪಿಸಲು ಅವಕಾಶವಾಗುತ್ತದೆ ಎಂದು ತಿಳಿಸಿದರು.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ವಿ-ನಿಯಮಾವಳಿಗಳ ರಚನೆ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುಮೋದನೆ ಪಡೆದು ಮುಂದಿನ ಸಭೆಯಲ್ಲಿ ಮಂಡಿಸಲು ಕ್ರಮವಹಿಸುವುದಾಗಿ ತಿಳಿಸಿದರು. | ವಿ-ನಿಯಮಾವಳಿಗಳ ರಚನೆ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪ ಕಾರ್ಯದರ್ಶಿ( ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
15. ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ನಿಗಮ, ಹಾಸನ
16. ಕಛೇರಿ ಪ್ರತಿ.

# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/22 /2012-13

ದಿನಾಂಕ: 14-08-2012

## ಸಭಾಹ್ವಾನ ಪತ್ರ

ದಿನಾಂಕ: **24-08-2012**ರಂದು **ಶುಕ್ರವಾರ** ಮ: **12-05** ಗಂಟೆಗೆ ಶ್ರೀ ಬಿ.ಆರ್.ಸತ್ಯನಾರಾಯಣ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ.
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ದಿನಾಂಕ: 14-06-2012ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ವಿಚಾರ
2. ದಿನಾಂಕ: 02-07-2012ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
3. ದಿನಾಂಕ: 04-07-2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
4. ದಿನಾಂಕ: 29-06-2012ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
5. ದಿನಾಂಕ: 27-06-2012ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
6. ದಿನಾಂಕ: 28-06-2012ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ
7. 2011-12ನೇ ಸಾಲಿನ ವಾರ್ಷಿಕ ಲೆಕ್ಕವನ್ನು ಸಾಮಾನ್ಯ ಸಭೆಯಲ್ಲಿ ಮಂಡಿಸುವ ಬಗ್ಗೆ.

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ವಸತಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಲೋಕಸಭಾ ಸದಸ್ಯರು,ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ